**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.669/2020**

| | | |
|---|---|---|
| ಸಾಕ್ಷಿದಾರರ ಹೆಸರು | : ಪುರಶೋತ್ತಮ್ | ಫ್ರಾಸಾ-5 |
| ತಂದೆಯ ಹೆಸರು | : ಜೇಸಾ ರಾಮ್‌ಜೀ | ಚಾಸಾ-7 |
| ವಯಸ್ಸು | : 44 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪೈಂಟಿಂಗ್ | ದಿನಾಂಕಃ 02.09.2025 |
| ವಾಸಸ್ಥಳ | : ಛತ್ರಮೈದಾನ | |

**:ಮುಖ್ಯ ವಿಚಾರಣೆ: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ 1, 4, 5 ಮತ್ತು 6 ನೇ ಆರೋಪಿತರ ಪರಿಚಯ ನನಗಿಲ್ಲ. 2 ಮತ್ತು 4 ನೇ ಆರೋಪಿತರ ಪರಿಚಯವೂ ಸಹಾ ನನಗಿಲ್ಲ. ಸದರಿ ಆರೋಪಿತರು ಗೈರು ಹಾಜರಿದ್ದು ಅವರ ಗುರುತುವಿಕೆಯಲ್ಲಿ ತಕರಾರು ಇಲ್ಲ ಎಂದು ಆರೋಪಿತರ ಪರ ವಕೀಲರು ತಿಳಿಸುತ್ತಾರೆ. ಚಾಸಾ-8 ರವರ ಪರಿಚಯ ನನಗಿಲ್ಲ.

ಸಾಕ್ಷಿಯು ದಿ.04.04.2017 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ನಿಪಿ-3 ರಿಂದ 8 ರ ಪೋಟೋಗಳಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಮಹಜರ್ ನ್ನು ನಿಪಿ-13, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು.

ಕಳೆದ 4-5 ವರ್ಷಗಳ ಹಿಂದೆ ನಾನು ಮೂಡಿಗೆರೆ ಟೌನ್ ನಲ್ಲಿ ಇರುವಾಗ ಮೂಡಿಗೆರೆ ಪೋಲಿಸರು ನನ್ನ ಸಹಿಗಳನ್ನು ಪಡೆದು, ಪೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಾಕ್ಕೆ ನನ್ನ ಸಹಿಯನ್ನು ಪಡೆದು ಪೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-13 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-3 ರಿಂದ 8 ರಲ್ಲಿ ಕಾಣುವ ವಾಹನದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೋಲಿಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:**

ಸಾಕ್ಷಿಗೆ ನಿಪಿ-13 ರಲ್ಲಿರುವ ಸಂಪೂರ್ಣ ವಿಚಾರವನ್ನು ಓದಿ ಹೇಳಲಾಗಿ ಸಾಕ್ಷಿಯು ಅದನ್ನು ಸಂಪೂರ್ಣವಾಗಿ ಅಲ್ಲಗಳೆಯುತ್ತಾರೆ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.